**RW**-5

**ದಿನಾಂಕ 27.01.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಶ್ರೀ ಎಂ ಜಿ ಜಿ ವಕೀಲರಿಂದ :-**

ಪ್ರಮಾಣ ಪತ್ರದ ಸಂಗತಿಗಳು ಸತ್ಯವಾಗಿದೆ ಅದನ್ನು ತಿಳಿದುಕೊಂಡು ಸಹಿ ಮಾಡಿದ್ದೇನೆ. ನಾನು ಸಲ್ಲಿಸಿರುವ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ಈಗ ನನಗೆ ತೋರಿಸಿದ ವಿಲ್ ಮೇಲಿರುವ ಸಹಿ ನನ್ನ ಸಹಿ. ಸಾಕ್ಷಿ ಗುರುತಿಸಿದ ದಾಖಲೆಯನ್ನು ಈಗಾಗಲೇ ನಿಆರ್ 3 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿ ಗುರುತಿಸಿದ ಸಾಕ್ಷಿ ಸಹಿಯನ್ನು ನಿಆರ್ 3(ಎ) ಎಂದು ಗುರುತಿಸಲಾಗಿದೆ. ನನ್ನ ಅಜ್ಜಿ ರತ್ನಮ್ಮರವರು ನನಗೆ ನನ್ನ ಮೊಮ್ಮಗಳ ಹೆಸರಿನಲ್ಲಿ ಆಸ್ತಿ ಮಾಡುತ್ತಿದ್ದೇನೆ ವಿಲ್ ಗೆ ಸಹಿ ಮಾಡಿ ಎಂದು ಹೇಳಿದರು ಆದ್ದರಿಂದ ಅದಕ್ಕೆ ಸಹಿ ಮಾಡಿದ್ದೇನೆ. ರತ್ನಮ್ಮರವರು ಕೂಡ ನನ್ನ ಎದುರಿಗೆ ಸಹಿ ಮಾಡಿದ್ದಾರೆ. ಸಾಕ್ಷಿ ರತ್ನಮ್ಮರವರ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಆರ್ 3(ಬಿ) ಎಂದು ಗುರುತಿಸಲಾಗಿದೆ. ಪಕ್ಕದಲ್ಲಿರುವ ಹೆಬ್ಬೆಟ್ಟು ಗುರುತು ಅವರದ್ದು ಅವರೇ ಹಾಕಿದ್ದು ಎಂದು ಸಾಕ್ಷಿ ಅದನ್ನು ಗುರುತಿಸಿರುತ್ತಾರೆ. ಅದನ್ನು ನಿಆರ್ 3(ಸಿ) ಎಂದು ಗುರುತಿಸಲಾಗಿದೆ.

**ಪಾಟೀ ಸವಾಲು - ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓದಿಹೇಳಲಾಗಿ, ಕೇಳಿ, ಸರಿ ಇದೆ ಎಂದು ಒಪ್ಪಿರುತ್ತಾರೆ.**

**(ಬಿ. ಎಸ್. ಭಾರತಿ)**
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಚಾಮರಾಜನಗರ.**